ಕರ್ನಾಟಕ ಸರ್ಕಾರ

(ಸಹಕಾರ ಇಲಾಖೆ)

ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52

ಸಂಖ್ಯೆ:ಸಿಆರ್‌ಡಿ/ಸಿಎಬಿ-1/67/2015-16

ದಿನಾಂಕ:06-10-2015

1. ಮುಖ್ಯಕಾರ್ಯನಿರ್ವಹಣಾಧಿಕಾರಿಗಳು,
   ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ.,
2. ವ್ಯವಸ್ಥಾಪಕ ನಿರ್ದೇಶಕರು,
   ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ, ಬೆಂಗಳೂರು.
3. ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು,
4. ಎಲ್ಲಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು,
5. ಎಲ್ಲಾ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರು,
6. ಎಲ್ಲಾ ಉಪವಿಭಾಗೀಯ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳು.

C.D.C.C. ... CHIKMA... Inward No. 3507 13 ... 2015

ಮಾನ್ಯರೇ,

ವಿಷಯ :- ರಾಜ್ಯದಲ್ಲಿ ಉದ್ಭವಿಸಿರುವ ತೀವ್ರ ಬರ ಪರಿಸ್ಥಿತಿ ಪರಿಣಾಮವಾಗಿ ರಾಜ್ಯದ ಸಹಕಾರ ಸಂಸ್ಥೆಗಳ ಮೂಲಕ ಸಾಲ ಪಡೆದು 2015-16 ನೇ ಸಾಲಿನಲ್ಲಿ ವಸೂಲಿಗೆ ಬರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಕಂತುಗಳನ್ನು ಒಂದು ವರ್ಷದ ಅವಧಿಗೆ ಮುಂದೂಡುವ ಬಗ್ಗೆ

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ ಸಿಒ 358 ಸಿಎಲ್ಎಸ್ 2015, ಬೆಂಗಳೂರು, ದಿ.30.092015

##

ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ, ರಾಜ್ಯದಲ್ಲಿ ಉದ್ಭವಿಸಿರುವ ತೀವ್ರ ಬರ ಪರಿಸ್ಥಿತಿ ಪರಿಣಾಮವಾಗಿ ರಾಜ್ಯದ ಸಹಕಾರ ಸಂಸ್ಥೆಗಳ ಮೂಲಕ ದಿ.01-04-2004 ರಿಂದ ದಿ.31-3-2015 ರ ವರೆಗೆ ಸಾಲ ಪಡೆದು 2015-16 ನೇ ಸಾಲಿನಲ್ಲಿ ವಸೂಲಿಗೆ ಬರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಕಂತುಗಳನ್ನು ಒಂದು ವರ್ಷದ ಅವಧಿಗೆ ಮುಂದೂಡುವ ಬಗ್ಗೆ ಉಲ್ಲೇಖದಲ್ಲಿ ಸರ್ಕಾರ ಆದೇಶ ಹೊರಡಿಸಿದ್ದು, ಅದರ ಪ್ರತಿಯನ್ನು ಈ ಪತ್ರಕ್ಕೆ ಲಗತ್ತಿಸಿ ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ. ಸರ್ಕಾರದ ಆದೇಶದನ್ವಯ ಎಲ್ಲಾ ಅವಶ್ಯಕ ಕ್ರಮಗಳನ್ನು ತುರ್ತಾಗಿ ತೆಗೆದುಕೊಳ್ಳಲು ನಿರ್ದೇಶಿಸಲಾಗಿದೆ ಹಾಗೂ ಈ ಯೋಜನೆಯಲ್ಲಿ ಬಡ್ಡಿ ಸಹಾಯಧನ ಕ್ಲೇಮು ಮಾಡಲು ನಿಬಂಧಕರ ಕಛೇರಿಯಿಂದ ನಮೂನೆಗಳನ್ನು ಪ್ರತ್ಯೇಕವಾಗಿ ನೀಡಲಾಗುವುದು.

(ಎಂ.ಕೆ.ಐಯಪ್ಪ)
ಸಹಕಾರ ಸಂಘಗಳ ನಿಬಂಧಕರು
ಕರ್ನಾಟಕ ರಾಜ್ಯ, ಬೆಂಗಳೂರು.

C.D.C.C. BANK LTD. CHIKMAG... 2296 27.10.15

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ಉದ್ಭವಿಸಿರುವ ತೀವ್ರ ಬರ ಪರಿಸ್ಥಿತಿ ಪರಿಣಾಮವಾಗಿ ರಾಜ್ಯದ ಸಹಕಾರ ಸಂಸ್ಥೆಗಳ ಮೂಲಕ ಸಾಲ ಪಡೆದು 2015-16ನೇ ಸಾಲಿನಲ್ಲಿ ವಸೂಲಿಗೆ ಬರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಕಂತುಗಳನ್ನು ಒಂದು ವರ್ಷದ ಅವಧಿಗೆ ಮುಂದೂಡುವ ಬಗ್ಗೆ ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಸಇ 22 ಆಂಅಸ 2015 ಬೆಂಗಳೂರು, ದಿನಾಂಕ:08.05.2015.
2. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ:ಸಿಆರ್‌ಡಿ/ಸಿಎಬಿ-1/ 2015-16, ದಿನಾಂಕ:15.09.2015.

08.10.15

**ಪ್ರಸ್ತಾವನೆ:**

*****

ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ, ಅಂದರೆ 2015-16 ನೇ ಸಾಲಿನ ಆಗಸ್ಟ್ 2015 ರವರೆಗೆ 136 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ರಾಜ್ಯ ಸರ್ಕಾರವು ಘೋಷಿಸಿದೆ. ಬರಗಾಲ ಪರಿಸ್ಥಿತಿ ಹಿನ್ನೆಲೆಯಲ್ಲಿ ದಿನಾಂಕ:31.08.2015 ರಂದು ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಅಧ್ಯಕ್ಷತೆಯಲ್ಲಿ ಮತ್ತು ದಿನಾಂಕ:07.09.2015 ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಈ ಬಗ್ಗೆ ಸಭೆಗಳು ನಡೆದಿದ್ದು, ಬರಗಾಲದ ಹಿನ್ನೆಲೆಯಲ್ಲಿ ರಾಜ್ಯದ ರೈತರು ಸಂಕಷ್ಟಕ್ಕೀಡಾಗಿದ್ದು, ಇವರ ನೆರವಿಗೆ ಬರಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ, ರಾಜ್ಯದಲ್ಲಿ ಸಹಕಾರ ಸಂಸ್ಥೆಗಳ ಮೂಲಕ ಅಂದರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಮತ್ತು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳ ಮೂಲಕ ಕೃಷಿ ಮತ್ತು ಕೃಷಿ ಸಂಬಂಧಿತ ಮಧ್ಯಮಾವಧಿ/ದೀರ್ಘಾವಧಿ ಸಾಲಗಳನ್ನು ಪಡೆದಿದ್ದು, ದಿನಾಂಕ:01.04.2015 ರಿಂದ 31.03.2016 ಅವಧಿಯಲ್ಲಿ ಮರುಪಾವತಿಗೆ ಬರುವ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲದ ಕಂತುಗಳನ್ನು ಒಂದು ವರ್ಷದ ಅವಧಿಗೆ ಮುಂದೂಡಲು ಸರ್ಕಾರವು ತೀರ್ಮಾನಿಸಿದೆ.

ರಾಜ್ಯದಲ್ಲಿ ಪ್ರಸ್ತುತ ರೂ.10.00 ಲಕ್ಷಗಳವರೆಗಿನ ಮಧ್ಯಮಾವಧಿ/ದೀರ್ಘಾವಧಿ ಸಾಲಗಳನ್ನು ಸಹಕಾರ ಸಂಸ್ಥೆಗಳ ಮೂಲಕ ವಿತರಿಸಲಾಗುತ್ತಿದೆ. ಈ ಸಾಲಗಳಲ್ಲಿ ಈ ಹಿಂದೆ ಶೇ.6; ಶೇ.4 ರ ಬಡ್ಡಿ ವಿಧಿಸಲಾಗುತ್ತಿದ್ದು, ಪ್ರಸ್ತುತ ಶೇ.3 ರ ಬಡ್ಡಿ ವಿಧಿಸಲಾಗುತ್ತಿದೆ. ಈ ಸಾಲಗಳಿಗೆ ರಾಜ್ಯ ಸರ್ಕಾರದಿಂದ ಬಡ್ಡಿ ಸಹಾಯಧನವನ್ನು ಒದಗಿಸಲಾಗುತ್ತಿದೆ.

ಮೇಲೆ ಓದಲಾದ (2) ರ ಪ್ರಸ್ತಾವನೆಯಲ್ಲಿ, ರಾಜ್ಯದಲ್ಲಿ ತೀವ್ರ ಬರಗಾಲ ಇರುವ ಹಿನ್ನೆಲೆಯಲ್ಲಿ 2015-16 ನೇ ಸಾಲಿನಲ್ಲಿ ವಸೂಲಿಗೆ ಬರುವ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲದ ಕಂತುಗಳನ್ನು ಒಂದು ವರ್ಷದ ಅವಧಿಗೆ ಮುಂದೂಡಲು ಮತ್ತು ಈ ರೀತಿ ಮುಂದೂಡುವುದರ ಪರಿಣಾಮವಾಗಿ ಸರ್ಕಾರ ಈ ಸಾಲಗಳಿಗೆ ನೀಡಬೇಕಾದ ಬಡ್ಡಿ ರಿಯಾಯಿತಿಯ ಜೊತೆಯಲ್ಲಿ ರೈತರು ಪಾವತಿಸಬೇಕಾದ ಅವರ ಪಾಲಿನ ಶೇ.6/4/3 ರ ಬಡ್ಡಿಯನ್ನು ಸರ್ಕಾರ ಭರಿಸಲು ಆದೇಶ ಹೊರಡಿಸಲು ಮತ್ತು ಇದಕ್ಕೆ ತಗಲುವ ವೆಚ್ಚವನ್ನು 2015-16 ನೇ ಸಾಲಿನಲ್ಲಿ ಕೃಷಿ ಸಾಲಗಳ ಬಡ್ಡಿ ಸಹಾಯಧನದ ಯೋಜನೆಯಡಿ ಒದಗಿಸಿರುವ ರೂ.737.41 ಕೋಟಿಗಳಿಂದ ಭರಿಸಲು ಆದೇಶ ಹೊರಡಿಸಲು ತಮ್ಮ ಪ್ರಸ್ತಾವನೆಯಲ್ಲಿ ನಿಬಂಧಕರು ಸರ್ಕಾರವನ್ನು ಕೋರಿರುತ್ತಾರೆ.

ನಿಬಂಧಕರು ಪ್ರಸ್ತಾವನೆಯಲ್ಲಿ ಕೋರಿರುವಂತೆ ರಾಜ್ಯದ ಸಹಕಾರ ಸಂಸ್ಥೆಗಳ ಮೂಲಕ ಸಾಲಪಡೆದು 2015-16 ನೇ ಸಾಲಿನಲ್ಲಿ ವಸೂಲಾತಿಗೆ ಬರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ

264786

ಸಾಲದ ಕಂತುಗಳನ್ನು ಒಂದು ವರ್ಷದ ಅವಧಿಗೆ ಷರತ್ತುಗಳಿಗೊಳಪಟ್ಟು ಮುಂದೂಡಲು ಸರ್ಕಾರವು ತೀರ್ಮಾನಿಸಿ ಅದರಂತೆ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ:ಸಿಓ 358 ಸಿಎಲ್‌ಎಸ್ 2015, ದಿನಾಂಕ: 30.09.2015</u>

ರಾಜ್ಯದ ಸಹಕಾರ ಸಂಘಗಳು ಅಂದರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಮತ್ತು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳ ಮೂಲಕ ಸಾಲಪಡೆದು 2015–16ನೇ ಸಾಲಿನಲ್ಲಿ ವಸೂಲಾತಿಗೆ ಬರುವ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲದ ಕಂತುಗಳನ್ನು ಒಂದು ವರ್ಷದ ಅವಧಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮುಂದೂಡಲು ಆದೇಶಿಸಿದೆ.

**ಷರತ್ತುಗಳು**

1. ಪ್ಯಾಕ್ಸ್/ಡಿಸಿಸಿಬಿ/ಪಿಎಲ್‌ಡಿ ಬ್ಯಾಂಕ್‌ಗಳ ಮೂಲಕ ದಿನಾಂಕ 01.04.2004 ರಿಂದ ದಿನಾಂಕ 31.03.2015ರವರೆಗೆ ಸಾಲ ಪಡೆದು 2015–16 ನೇ ಸಾಲಿನಲ್ಲಿ ಅಂದರೆ ದಿನಾಂಕ:01.04.2015 ರಿಂದ 31.03.2016 ರವರೆವಿಗೆ ಮರುಪಾವತಿಗೆ ತಗಾದೆಗೆ ಬರುವ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲದ ಕಂತುಗಳನ್ನು ಒಂದು ವರ್ಷದ ಅವಧಿಗೆ ಮುಂದೂಡಿದೆ.
2. ಈಗಾಗಲೇ ಈ ಸಾಲದ ಕಂತುಗಳನ್ನು ಮರು ಪಾವತಿಸಿರುವ ಸಾಲಗಾರರಿಗೆ ಈ ಯೋಜನೆ ಅನ್ವಯವಾಗುವುದಿಲ್ಲ.
3. 2015–16ನೇ ಸಾಲಿನಲ್ಲಿ ಒಂದು ವರ್ಷದ ಕಂತುಗಳನ್ನು ಮುಂದೂಡುವುದರಿಂದ ಒಂದು ವರ್ಷದ ಅವಧಿಗೆ ಚಾಲ್ತಿ ಕಂತುಗಳಿಗೆ ಸಂಬಂಧಿಸಿದ ಹೊರಬಾಕಿಗೆ ಮಾತ್ರ ಸರ್ಕಾರವು ಬಡ್ಡಿ ಸಹಾಯಧನದ ಜೊತೆಗೆ ರೈತರು ಸಾಲದ ಕಂತುಗಳ ಜೊತೆಯಲ್ಲಿ ಪಾವತಿಸಬೇಕಾದ ಶೇ.6/4/3 ರ ದರದ ಬಡ್ಡಿಯನ್ನು ಸರ್ಕಾರವು ಮನ್ನಾ ಮಾಡಿ ಈ ಮೊತ್ತವನ್ನು ರೈತರ ಪರವಾಗಿ ಸರ್ಕಾರವೇ ಭರಿಸುತ್ತದೆ.
4. ಈ ಯೋಜನೆಯಲ್ಲಿ ತಗಲುವ ವೆಚ್ಚವನ್ನು 2015–16ನೇ ಸಾಲಿಗೆ ಸಹಕಾರ ಇಲಾಖೆಗೆ ಒದಗಿಸಿರುವ ಆಯವ್ಯಯದ ಲೆಕ್ಕ ಶೀರ್ಷಿಕೆ 2425–00–107–2–41 ರಿಂದ ಭರಿಸತಕ್ಕದ್ದು.
5. ಸಾಲದ ಕಂತುಗಳನ್ನು ಪ್ರಸಕ್ತ ಸಾಲಿನಲ್ಲಿ ಮುಂದೂಡುವುದರಿಂದ ಸಾಲದ ಕಂತು ಅವಧಿ/ನಿಗಧಿತ ದಿನಾಂಕ ಮುಗಿದ ಕೂಡಲೇ ತ್ರೈಮಾಸಿಕವಾಗಿ ಆಯಾ ವರ್ಷಕ್ಕೆ ನಿಗದಿಪಡಿಸಿದ ಬಡ್ಡಿ ಸಹಾಯಧನ ಮತ್ತು ಸಾಲದ ಕಂತುಗಳ ಜೊತೆ ರೈತರು ಪಾವತಿಸಬೇಕಾಗಿದ್ದ ಶೇ.6/4/3 ರ ಬಡ್ಡಿ ಮೊತ್ತದ ಕ್ಲೈಂ ಬಿಲ್ಲುಗಳನ್ನು ಸಲ್ಲಿಸತಕ್ಕದ್ದು.
6. ಮಧ್ಯಮಾವಧಿ ಸಾಲಗಳಿಗೆ ಸಂಬಂಧಿಸಿದಂತೆ ಪ್ಯಾಕ್ಸ್/ಡಿಸಿಸಿ ಬ್ಯಾಂಕುಗಳ ಬಿಲ್ಲುಗಳನ್ನು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಯಾರಿಸಿ ಸಹಕಾರ ಸಂಘಗಳ ಲೆಕ್ಕಪರಿಶೋಧನ ಉಪನಿರ್ದೇಶಕರು ಮತ್ತು ಸಹಕಾರ ಸಂಘಗಳ ಉಪನಿಬಂಧಕರು ಇವರುಗಳ ಜಂಟಿ ದೃಢೀಕರಣದೊಂದಿಗೆ ತ್ರೈಮಾಸಿಕ ಬಿಲ್ಲುಗಳನ್ನು ಬಿಡುಗಡೆಗೆ ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್ ಇವರ ಮೂಲಕ ಸಹಕಾರ ಸಂಘಗಳ ನಿಬಂಧಕರಿಗೆ ಸಲ್ಲಿಸತಕ್ಕದ್ದು.
7. ದೀರ್ಘಾವಧಿ ಸಾಲಗಳಿಗೆ ಸಂಬಂಧಿಸಿದಂತೆ ಪಿಕಾರ್ಡ್ ಬ್ಯಾಂಕುಗಳ ಬಿಲ್ಲುಗಳನ್ನು ಜಿಲ್ಲಾ ವ್ಯವಸ್ಥಾಪಕರು ತಯಾರಿಸಿ ಸಹಕಾರ ಸಂಘಗಳ ಲೆಕ್ಕಪರಿಶೋಧನ ಉಪನಿರ್ದೇಶಕರು ಮತ್ತು ಸಹಕಾರ ಸಂಘಗಳ ಉಪನಿಬಂಧಕರು ಇವರುಗಳ ಜಂಟಿ ದೃಢೀಕರಣದೊಂದಿಗೆ ಕಸ್ಕಾರ್ಡ್ ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕರು ಇವರ ಮೂಲಕ ಸಹಕಾರ ಸಂಘಗಳ ನಿಬಂಧಕರಿಗೆ ಸಲ್ಲಿಸತಕ್ಕದ್ದು.
8. ಸಹಕಾರ ಸಂಘಗಳ ನಿಬಂಧಕರು ಅರ್ಹ ಕ್ಲೈಂ ಗಳನ್ನು ಪರಿಶೀಲಿಸಿ, ನಿಗಧಿತವಾಗಿ ಹಣ ಬಿಡುಗಡೆಗೆ ಕ್ರಮವಿಡತಕ್ಕದ್ದು ಮತ್ತು ಕಾಲಕಾಲಕ್ಕೆ ಸರ್ಕಾರಕ್ಕೆ ಬಳಕೆ ಪ್ರಮಾಣ ಪತ್ರವನ್ನು ಒದಗಿಸತಕ್ಕದ್ದು.

9. ಸಹಕಾರ ಸಂಘಗಳ ನಿಬಂಧಕರು ಈ ಯೋಜನೆ ಅನುಷ್ಠಾನಕ್ಕಾಗಿ ಅಗತ್ಯವಿರುವ ಪ್ರಸ್ತಾವನೆಗಳನ್ನು ಒದಗಿಸಲು ಮತ್ತು ಕಾಲಕಾಲಕ್ಕೆ ಸಂಬಂಧಿಸಿದವರಿಗೆ ಅಗತ್ಯ ಸಲಹೆ/ಸೂಚನೆ/ನಿರ್ದೇಶನಗಳನ್ನು ನೀಡತಕ್ಕದ್ದು.
10. ಈ ಯೋಜನೆಯಡಿ ಕ್ಲೈಂ ಬಿಲ್ಲುಗಳನ್ನು ಸಹಕಾರ ಸಂಘಗಳ ನಿಬಂಧಕರಿಗೆ ಸಲ್ಲಿಸಲು 30 ಜೂನ್ 2016 ಅಂತಿಮ ದಿನಾಂಕವಾಗಿರತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/3861/ಪ್ರಾ/2015 ದಿನಾಂಕ:30.09.2015 ರಲ್ಲಿನ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ವೆಂಕಟಸ್ವಾಮಿ)
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ:-**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಕೂಡಲೇ ಪ್ರಕಟಿಸಿ ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಯನ್ನು:**
1. ಮಹಾಲೇಖಪಾಲರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸಹಕಾರ ಸಂಘಗಳ ನಿಬಂಧಕರು, ನಂ.1, ಅಲಿ ಅಸ್ಕರ್ ರಸ್ತೆ, ಬೆಂಗಳೂರು.
7. ಸಹಕಾರ ಲೆಕ್ಕಪರಿಶೋಧನಾ ನಿರ್ದೇಶಕರು, ಶಂಕರಮಠ ರಸ್ತೆ, ಬೆಂಗಳೂರು-52.
8. ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಉತ್ತುಂಗ, ನಂ.1, ಪಂಪಾಮಹಾಕವಿ ರಸ್ತೆ, ಬಸವನಗುಡಿ, ಬೆಂಗಳೂರು-4. ಚಾಮರಾಜಪೇಟೆ, ಬೆಂಗಳೂರು-18.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಚಾಮರಾಜಪೇಟೆ, ಬೆಂಗಳೂರು-18.
10. ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
11. ರಾಜ್ಯ ಖಜಾನೆ ಅಧಿಕಾರಿ, ಜೆ.ಸಿ. ರಸ್ತೆ, ಬೆಂಗಳೂರು.
12. ಆಂತರಿಕ ಆರ್ಥಿಕ ಸಲಹೆಗಾರರು, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
14. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
15. ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಸಹಕಾರ ಇಲಾಖೆ, ಬೆಂಗಳೂರು
16. ಸರ್ಕಾರದ ಅಧೀನ ಕಾರ್ಯದರ್ಶಿ-3, ಸಹಕಾರ ಇಲಾಖೆ, ಬೆಂಗಳೂರು.
17. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿ